ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

**ನೆನಪೋಲೆ**

ಸಂಖ್ಯೆ: ಕಾಶಿಇ/198/ಆಡಿಟ್-14/2017-18/ನೇ.ವಿ-1

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 16.03.2018.

**ಸುತ್ತೋಲೆ**

ವಿಷಯ: 2009ರಲ್ಲಿ ಕೆ.ಪಿ.ಎಸ್.ಸಿ. ಮೂಲಕ ನೇಮಕಗೊಂಡಿರುವ ಸಹಾಯಕ ಪ್ರಾಧ್ಯಾಪಕರುಗಳ ಪದವಿಗಳ ನೈಜತೆಯನ್ನು ಪರಿಶೀಲಿಸುವ ಬಗ್ಗೆ.

ಉಲ್ಲೇಖ: ಮಹಾಲೇಖಾಪಾಲರು, ಕರ್ನಾಟಕ ರಾಜ್ಯ ಇವರ ಆಡಿಟ್ ಆಕ್ಷೇಪಣಾ ವರದಿ ದಿನಾಂಕ:05.07.2017.

******

ಮಹಾಲೇಖಾಪಾಲರು, ಕರ್ನಾಟಕ ರಾಜ್ಯ ಇವರು ದಿನಾಂಕ:05.07.2017 ರ ಆಡಿಟ್ ಆಕ್ಷೇಪಣಾ ವರದಿಯಲ್ಲಿ 2009 ರಲ್ಲಿ ಆಯ್ಕೆಯಾದ ಸಹಾಯಕ ಪ್ರಾಧ್ಯಾಪಕರುಗಳು ಆಯ್ಕೆ ಸಂದರ್ಭದಲ್ಲಿ ಸಲ್ಲಿಸಿದ ಎಂ.ಫಿಲ್ ಅಂಕಪಟ್ಟಿಗಳು ಹಾಗೂ ಪ್ರಮಾಣ ಪತ್ರದ ನೈಜತೆಯನ್ನು ಪರಿಶೀಲಿಸಿ, ವರದಿಯನ್ನು ಸಲ್ಲಿಸುವಂತೆ ತಿಳಿಸಿದ ಹಿನ್ನೆಲೆಯಲ್ಲಿ ಈ ಕಛೇರಿಯ ದಿನಾಂಕ:26.09.2007 ಮತ್ತು 07.10.2017 ರ ಸುತ್ತೋಲೆಗಳಲ್ಲಿ ಇಲಾಖಾ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2009ರಲ್ಲಿ ಕೆ.ಪಿ.ಎಸ್.ಸಿ. ಮೂಲಕ ನೇಮಕಗೊಂಡಿರುವ ಸಹಾಯಕ ಪ್ರಾಧ್ಯಾಪಕರುಗಳು ಆಯ್ಕೆ ಸಮಯದಲ್ಲಿ ಸಲ್ಲಿಸಿರುವ ಎಂ.ಫಿಲ್. ಅಂಕಪಟ್ಟಿ ಹಾಗೂ ಪ್ರಮಾಣ ಪತ್ರಗಳ ಪ್ರತಿಗಳನ್ನು ದೃಢೀಕರಿಸಿ ಈ ಕಛೇರಿಗೆ ಸಲ್ಲಿಸುವಂತೆ ಸೂಚಿಸಲಾಗಿತ್ತು.

ಅದರಂತೆ ಕಾಲೇಜುಗಳಿಂದ ಸ್ವೀಕೃತಗೊಂಡ ಸದರಿ ಎಂ.ಫಿಲ್ ಅಂಕಪಟ್ಟಿ ಹಾಗೂ ಪ್ರಮಾಣ ಪತ್ರಗಳನ್ನು ಪಟ್ಟಿ ಮಾಡಿ, ಸಂಬಂಧಪಟ್ಟ ವಿಶ್ವವಿದ್ಯಾಲಯಗಳಲ್ಲಿನ ದಾಖಲೆಗಳೊಂದಿಗೆ ಪರಿಶೀಲಿಸಿ, ಅವುಗಳ ನೈಜತೆ ಕುರಿತು ಸ್ಪಷ್ಟ ಅಭಿಪ್ರಾಯದೊಂದಿಗೆ ವರದಿಯನ್ನು ಸಲ್ಲಿಸಲು ಈ ಕಛೇರಿಯ ಆದೇಶ ಸಮ ಸಂಖ್ಯೆ ದಿನಾಂಕ:13.10.2017 ಮತ್ತು 07.12.2017 ರಲ್ಲಿ ಅಧಿಕಾರಿಗಳ 02 ತಂಡಗಳನ್ನು ರಚಿಸಲಾಗಿರುತ್ತದೆ.

ಮುಂದುವರೆದು, ಇನ್ನೂ ಕೆಲವು ಸಹಾಯಕ ಪ್ರಾಧ್ಯಾಪಕರ ಎಂ.ಫಿಲ್ ಅಂಕಪಟ್ಟಿ ಹಾಗೂ ಪ್ರಮಾಣ ಪತ್ರಗಳು ಸ್ವೀಕೃತವಾಗಬೇಕಿದ್ದು, ಈಗಾಗಲೇ ತಮ್ಮ ಕಾಲೇಜುಗಳಿಂದ ಸದರಿ ಮಾಹಿತಿ/ದಾಖಲಾತಿಗಳನ್ನು ಕೇಂದ್ರ ಕಛೇರಿಗೆ ಕಳುಹಿಸಿರುವ ಬಗ್ಗೆ ಪರಿಶೀಲಿಸಿ, ಇದುವರೆವಿಗೂ ಸಲ್ಲಿಸದೇ ಇದ್ದಲ್ಲಿ ಕಡ್ಡಾಯವಾಗಿ ಅಪೇಕ್ಷಿತ ಮಾಹಿತಿ/ದಾಖಲಾತಿಗಳನ್ನು ತುರ್ತಾಗಿ ಈ ಕಛೇರಿಗೆ ಸಲ್ಲಿಸುವಂತೆ ಮತ್ತೊಮ್ಮೆ ಸೂಚಿಸಲಾಗಿದೆ. ತಪ್ಪಿದಲ್ಲಿ ಮುಂದಿನ ಆಗು-ಹೋಗುಗಳಿಗೆ ಸಂಬಂಧಿಸಿದ ಪ್ರಾಂಶುಪಾಲರನ್ನೆ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.

**"ಟಿಪ್ಪಣಿ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"**

Shilpa

ಕಾಲೇಜು ಶಿಕ್ಷಣ ಮುಖ್ಯ ಆಡಳಿತಾಧಿಕಾರಿಗಳು

**ಇವರಿಗೆ:**

1) ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3) ಮ್ಯಾನೇಜರ್, ಮಾಹಿತಿ ತಂತ್ರಜ್ಞಾನ ವಿಭಾಗ, ಕಾ.ಶಿ.ಆ. ಕಛೇರಿ, ಬೆಂಗಳೂರು – ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.
4) ಕಛೇರಿ ಪ್ರತಿ.